ಮಂಗಳೂರು ನಗರದಲ್ಲಿ ಮಲೇರಿಯಾ ರೋಗ ತಡೆಗಟ್ಟುವುದು

413 (721) ಶ್ರೀ ಕೆ. ಜಯರಾಮ ಶೆಟ್ಟಿ (ಉಳ್ಳಾಲ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

1) 1997ನೇ ಡಿಸೆಂಬರ್ ನಿಂದ ಜನವರಿ 98ರ ವರೆಗೆ ಮಂಗಳೂರು ಮಹಾನಗರದಲ್ಲಿ ಮಲೇರಿಯಾ ರೋಗಿಗಳು ಎಷ್ಟು?

2) ಸರ್ಕಾರಿ ಆಸ್ಪತ್ರೆ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿರುವ ಸಂಖ್ಯೆ ಎಷ್ಟು?

3) ಆರೋಗ್ಯ ಇಲಾಖೆಯ ವತಿಯಿಂದ ಮಲೇರಿಯಾ ರೋಗವನ್ನು ತಡೆಗಟ್ಟಲು ಮಂಗಳೂರು ಉಳ್ಳಾಲ, ಸೂರತ್ಕಲ್ ಪ್ರದೇಶಗಳಲ್ಲಿ ಕೈಗೊಂಡಿರುವ ಕ್ರಮಗಳೇನು?

ಡಾ॥ ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

1) ಮಂಗಳೂರು ಮಹಾನಗರದಲ್ಲಿ ಡಿಸೆಂಬರ್ 97 ರಿಂದ ಜನವರಿ 98ರ ವರೆಗೆ ಒಟ್ಟು 1270 ಮಲೇರಿಯಾ ಪ್ರಕರಣಗಳು ವರದಿಯಾಗಿರುತ್ತವೆ.

2) ಮೇಲ್ಕಂಡ ಎಲ್ಲಾ 1270 ಮಲೇರಿಯಾ ಪ್ರಕರಣಗಳು ಸರ್ಕಾರಿ ಆಸ್ಪತ್ರೆ ಮತ್ತು ಆರೋಗ್ಯ ಸಿಬ್ಬಂದಿಯ ಮೂಲಕ ಪತ್ತೆ ಹಚ್ಚಲಾಗಿದೆ. ಖಾಸಗಿ ಆಸ್ಪತ್ರೆಗಳಲ್ಲಿ ಕಂಡು ಬಂದ ಮಲೇರಿಯಾ ಪ್ರಕರಣಗಳ ಅಂಕಿ ಅಂಶಗಳು ವರದಿ ಆಗಿರುವುದಿಲ್ಲ.

3) ಆರೋಗ್ಯ ಇಲಾಖೆಯ ವತಿಯಿಂದ ಮಲೇರಿಯಾ ನಿಯಂತ್ರಿಸಲು ಈ ಕೆಳಕಂಡ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಅ) ಮಂಗಳೂರು ನಗರದಲ್ಲಿ ನಾಲ್ಕು ಸ್ಥಳಗಳಲ್ಲಿ ಮಲೇರಿಯಾ ಚಿಕಿತ್ಸಾಲಯಗಳನ್ನು ಸ್ಥಾಪಿಸಿ ಕಾರ್ಯನಿರ್ವಹಿಸುತ್ತಿವೆ. ಇಲ್ಲ ಜ್ವರ ಪೀಡಿತರ ರಕ್ತ ತಪಾಸಣೆ ನಡೆಸಿ ಕೂಡಲೇ ಚಿಕಿತ್ಸೆ ನೀಡಲಾಗುತ್ತಿದೆ. ಸಾಕಷ್ಟು ಪ್ರಮಾಣದಲ್ಲಿ ಮಲೇರಿಯಾ ನಿರೋಧಕ ಔಷಧಿ ಗುಳಿಗೆಗಳನ್ನು ಸರಬರಾಜು ಮಾಡಲಾಗಿದೆ.

ಆ) ಮಂಗಳೂರು ನಗರದಲ್ಲಿ ನಿರ್ಮಾಣ ಹಂತದಲ್ಲಿರುವ ಕಟ್ಟಡಗಳ ಪ್ರದೇಶದಲ್ಲಿ ಕಾರ್ಮಿಕರ ಸಕ್ರೀಯ ರಕ್ತ ಲೇವಣಿ ಸಂಗ್ರಹಣೆ ಪರೀಕ್ಷೆ ಮತ್ತು ಮಲೇರಿಯಾ ಪ್ರಕರಣಗಳಿಗೆ ಚಿಕಿತ್ಸೆ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಇ) ನಗರ ಪ್ರದೇಶದಲ್ಲಿ ಸೊಳ್ಳೆ ನಿಯಂತ್ರಣ ಕಾರ್ಯಕ್ರಮಕ್ಕೆ ಕೀಟನಾಶಕಗಳನ್ನು ಸಾಕಷ್ಟು ಪ್ರಮಾಣದಲ್ಲಿ ಸರಬರಾಜು ಮಾಡಲಾಗಿದೆ.

ಈ) ಉಳ್ಳಾಲ ಮತ್ತು ಸೂರತ್ಕಲ್ ಪ್ರದೇಶಗಳಲ್ಲಿ ಸಕ್ರಿಯ ರಕ್ತ ಲೇಪನ ಸಂಗ್ರಹಣೆಗಾಗಿ ಆರೋಗ್ಯ ಕಾರ್ಯಕರ್ತರು ಮನೆ, ಮನೆಗೆ ಭೇಟಿ ನೀಡಿ ಜ್ವರ ಪೀಡಿತರಿಗೆ ಮತ್ತು ಮಲೇರಿಯಾ ಪ್ರಕರಣಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಮಲೇರಿಯಾ ಪರೀಕ್ಷೆ ಮತ್ತು ಚಿಕಿತ್ಸೆಗೆ ವ್ಯವಸ್ಥೆ ಮಾಡಲಾಗಿದೆ.

ಉ) ಮಲೇರಿಯಾ ರೋಗ ಮತ್ತು ನಿಯಂತ್ರಣದ ಬಗ್ಗೆ ಜನ ಜಾಗೃತಿ ಮೂಡಿಸಲು ಆರೋಗ್ಯ ಶಿಕ್ಷಣವನ್ನು ನೀಡಲಾಗುತ್ತಿದೆ.